## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2015-16ನೇ ಸಾಲಿನಲ್ಲಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಗುಣಮಟ್ಟ ಬಾಧಿತ ಜನವಸತಿಗಳಲ್ಲಿ **171** ನೀರು ಶುದ್ಧೀಕರಣ ಘಟಕಗಳ ಅನುಷ್ಠಾನವನ್ನು **ಕೆ.ಆರ್.ಐ.ಡಿ.ಎಲ್.ಸಂಸ್ಥೆ** ಮುಖೇನ ಅನುಷ್ಠಾನಗೊಳಸಲು ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:30.05.2016ರಂದು ನಡೆದ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನದ ಕುರಿತ ಪ್ರಗತಿ ಪರಿಶೀಲನಾ ಸಭೆಯ ನಡವಳಿ.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 86 ಗ್ರಾನೀಸ(5) 2013, ದಿನಾಂಕ:24.05.2014.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 21 ಗ್ರಾನೀಸ(8) 2015, ದಿನಾಂಕ:13.08.2015.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 21 ಗ್ರಾನೀಸ(8)2015, ದಿನಾಂಕ:01.01.2016.
5. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 06 ಗ್ರಾನೀಸ(8)2016, ದಿನಾಂಕ:01.04.2016.
6. ಸಚಿವ ಸಂಪುಟದ ನಿರ್ಣಯ ಸಂಖ್ಯೆ:ಸಿ 263 2014, ದಿನಾಂಕ:15.05.2014.

*****

**ಪೀಠಿಕೆ:**

ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ ಕುಡಿಯುವ ನೀರಿನ ಜಲಮೂಲಗಳಲ್ಲಿ ರಾಸಾಯನಿಕ ಹಾಗೂ ಇತರೆ ಕಲುಷಿತೆಗಳನ್ನು ಹೊಂದಿರುವ ಮತ್ತು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಹಾನಿಕಾರಕ ಸೂಕ್ಷ್ಮಾಣು ಜೀವಿಗಳು ಕಂಡು ಬಂದಿದ್ದು, ಇದರಿಂದಾಗಿ ಕುಡಿಯುವ ನೀರು ಗುಣಮಟ್ಟದ ಭಾದೆಗೊಳಗಾಗಿರುವುದು ಕಂಡು ಬಂದಿದೆ. ಈ ಅಂಶವನ್ನು ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಅಂತಹ ಗುಣಮಟ್ಟದ ಭಾದೆಗೊಳಗಾಗಿರುವ ಜಲಮೂಲಗಳಿರುವ ಜನವಸತಿಗಳಲ್ಲಿ ಈಗಾಗಲೇ ಸರ್ಕಾರದಿಂದ ಸಾಮಾನ್ಯ ಮಾದರಿಯಲ್ಲಿ 1054 ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಹಾಗೂ ಕಿಯೋಸ್ಕ ಮಾದರಿಯಲ್ಲಿ 1302 ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದ್ದು, ಮೇಲೆ (1)ರಲ್ಲಿ ಓದಲಾದ ಸಭೆಯಲ್ಲಿ ತೀರ್ಮಾನಿಸಿದಂತೆ ಹೆಚ್ಚುವರಿಯಾಗಿ **171** ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ.

ಕರ್ನಾಟಕ ಸರ್ಕಾರವು ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ **2014-15ನೇ** ಸಾಲಿನಲ್ಲಿ **2000** ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಮಂಜೂರು ಮಾಡಿರುತ್ತದೆ. ಮುಂದುವರೆದು, **2015-16ನೇ** ಸಾಲಿನಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಬಜೆಟ್ ಭಾಷಣದಲ್ಲಿ **4000** ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲು **ರೂ.200.00ಕೋಟಿ** ಮೊತ್ತವನ್ನು ಘೋಷಿಸಿರುತ್ತಾರೆ. ಈ ಪೈಕಿ ಮೇಲೆ (1)ರಲ್ಲಿ ಓದಲಾದ ಸಭೆಯಲ್ಲಿ ತೀರ್ಮಾನಿಸಿದಂತೆ **171** ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅನುಷ್ಠಾನಗೊಳಿಸಲು ಸರ್ಕಾರ ನಿರ್ಧರಿಸಿದೆ. ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 50 ಗ್ರಾನೀಸ(8)2015(P2), ಬೆಂಗಳೂರು, ದಿನಾಂಕ:29.07.2016.**

ಪೀಠಿಕೆಯಲ್ಲಿನ ಪ್ರಸ್ತಾವನೆಯನ್ವಯ, 2015-16ನೇ ಸಾಲಿನಲ್ಲಿ ಗ್ರಾಮೀಣ ಜನವಸತಿಗಳಲ್ಲಿನ ಕುಡಿಯುವ ನೀರಿನ ಜಲಮೂಲಗಳಲ್ಲಿ ರಾಸಾಯನಿಕ ಹಾಗೂ ಇತರೆ ಕಲುಷಿತೆಗಳನ್ನು ಹೊಂದಿರುವ ಮತ್ತು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಹಾನಿಕಾರಕ ಸೂಕ್ಷ್ಮಾಣು ಜೀವಿಗಳು ಕಂಡು ಬಂದಿದ್ದು, ಇದರಿಂದಾಗಿ ಕುಡಿಯುವ ನೀರು ಗುಣಮಟ್ಟದ ಭಾದೆಗೊಳಗಾಗಿರುವ ಜಲಮೂಲಗಳಿರುವ ಜನವಸತಿಗಳಲ್ಲಿ **171** ನೀರು ಶುದ್ಧೀಕರಣ ಘಟಕಗಳನ್ನು **ಕೆ.ಆರ್.ಐ.ಡಿ.ಎಲ್.ಸಂಸ್ಥೆ** ಮುಖೇನ ಅನುಷ್ಠಾನಗೊಳಿಸಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಲು ಹರ್ಷಿಸುತ್ತದೆ.

ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

2. ಈ ಆದೇಶದೊಂದಿಗೆ ಲಗತ್ತಿಸಿರುವ **ಅನುಬಂಧ-1ರಲ್ಲಿ** ಅನುಮೋದಿಸಲ್ಪಟ್ಟ **171** ಗ್ರಾಮೀಣ ಜನವಸತಿಗಳಲ್ಲಿ **ಕೆ.ಟಿ.ಪಿ.ಪಿ.ನಿಯಮಾವಳಿಗಳನ್ವಯ** ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲು ಕೆ.ಆರ್.ಐ.ಡಿ.ಎಲ್.ಸಂಸ್ಥೆಯು ಕ್ರಮವಹಿಸತಕ್ಕದ್ದು.

3. ಅನುಮೋದಿಸಲ್ಪಟ್ಟ **171** ಗ್ರಾಮೀಣ ಜನವಸತಿಗಳ ಪೈಕಿ, ಮೇಲೆ (4)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಸಾಮಾನ್ಯ ಮಾದರಿಯ **19** ನೀರು ಶುದ್ಧೀಕರಣ ಘಟಕಗಳನ್ನು ಹಾಗೂ ಮೇಲೆ (5)ರಲ್ಲಿ ಓದಲಾದ ಸರ್ಕಾರದ ಆದೇಶದನ್ವಯ ಕಿಯೋಸ್ಕ್ ಮಾದರಿಯ **152** ನೀರು ಶುದ್ಧೀಕರಣ ಘಟಕಗಳನ್ನು ಅತ್ಯಂತ ಶೀಘ್ರವಾಗಿ ಅನುಷ್ಠಾನಗೊಳಿಸಿ ಸಾರ್ವಜನಿಕ ಬಳಕೆಗೆ ಸಮರ್ಪಿಸಲು **ಕೆ.ಆರ್.ಐ.ಡಿ.ಎಲ್.ಸಂಸ್ಥೆಯು** ಅಗತ್ಯ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾ.ಅ.ಪಂ.&ರಾಜ್ ಇಲಾಖೆರವರಿಂದ
ಅನುಮೋದಿಸಲ್ಪಟ್ಟಿದೆ.)

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ(ಕೆ.ಆರ್.ಐ.ಡಿ.ಎಲ್.ಸಂಸ್ಥೆ), ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು-09.
12. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
13. ಉತ್ತರ ಕನ್ನಡ, ಬೆಳಗಾವಿ, ಬಾಗಲಕೋಟೆ, ಕೊಪ್ಪಳ, ವಿಜಯಪುರ, ಮೈಸೂರು, ಚಿತ್ರದುರ್ಗ, ದಾವಣಗೆರೆ ಹಾಗೂ ಗದಗ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
14. ಉತ್ತರ ಕನ್ನಡ, ಬೆಳಗಾವಿ, ಬಾಗಲಕೋಟೆ, ಕೊಪ್ಪಳ, ವಿಜಯಪುರ, ಮೈಸೂರು, ಚಿತ್ರದುರ್ಗ, ದಾವಣಗೆರೆ ಹಾಗೂ ಗದಗ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
15. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರು,
16. ಉತ್ತರ ಕನ್ನಡ, ಬೆಳಗಾವಿ, ಬಾಗಲಕೋಟೆ, ಕೊಪ್ಪಳ, ವಿಜಯಪುರ, ಮೈಸೂರು, ಚಿತ್ರದುರ್ಗ, ದಾವಣಗೆರೆ ಹಾಗೂ ಗದಗ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳು.
17. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು,
18. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
19. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು,
20. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
22. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B complex, ಕಾವೇರಿ ಭವನ, ಕೆ.ಜಿ ರಸ್ತೆ, ಬೆಂಗಳೂರು-560009ರವರ ಆಪ್ತ ಕಾರ್ಯದರ್ಶಿ.
23. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಸಹಾಯಕರು.
24. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ನಂ.309, 3ನೇ ಮಹಡಿ, ಗೇಟ್ ನಂ.1, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು-560001.
25. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ-(10ಪ್ರತಿಗಳು).
26. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
27. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ)
28. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

# ಅನುಬಂಧ–1

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/50/ಗ್ರಾನೀಸ(8)/2015(P2), ಬೆಂಗಳೂರು, ದಿನಾಂಕ:29.07.2016ರ ಲಗತ್ತು :**

| ಕ್ರ.ಸಂ. | ಜಿಲ್ಲೆ | ಸಾಮಾನ್ಯ ಮಾದರಿಯ ನೀರು ಶುದ್ಧೀಕರಣ ಘಟಕಗಳ ಸಂಖ್ಯೆ | ಕಿಯೋಸ್ಕ್ ಮಾದರಿಯ ನೀರು ಶುದ್ಧೀಕರಣ ಘಟಕಗಳ ಸಂಖ್ಯೆ | ಒಟ್ಟು |
|---|---|---|---|---|
| 1 | ಉತ್ತರ ಕನ್ನಡ | 2 | 25 | 27 |
| 2 | ಬೆಳಗಾವಿ | 1 | 5 | 6 |
| 3 | ಬಾಗಲಕೋಟೆ | 13 | 30 | 43 |
| 4 | ಕೊಪ್ಪಳ | 3 | 35 | 38 |
| 5 | ವಿಜಯಪುರ | | 7 | 7 |
| 6 | ಮೈಸೂರು | | 1 | 1 |
| 7 | ಚಿತ್ರದುರ್ಗ | | 21 | 21 |
| 8 | ದಾವಣಗೆರೆ | | 7 | 7 |
| 9 | ಗದಗ | | 21 | 21 |
| | ಒಟ್ಟು : | **19** | **152** | **171** |

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾ.ನೀ.ಸ.)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.